ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ 03 ಸಿಡಿಸಿ (2) 2017-18

ನಿರ್ದೇಶಕರವರ ಕಛೇರಿ
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560 001
ದಿನಾಂಕ: 24-08-2017

## -:ಸುತ್ತೋಲೆ:-

ವಿಷಯ:- 2017-18ನೇ ಸಾಲಿನಲ್ಲಿ ಪೂರ್ಣಕಾಲಿಕ/ಅರೆಕಾಲಿಕ ನೆಲೆಯಲ್ಲಿ ಎಂ.ಟೆಕ್/ಎಂ.ಇ ಉನ್ನತ ವ್ಯಾಸಂಗದ ಸಲುವಾಗಿ PGCET-2017ರ ದಾಖಲೆಗಳ ಪರಿಶೀಲನೆ ಪ್ರಕ್ರಿಯೆಗೆ ಹಾಜರಾಗಲು ಅನುಮತಿ ನೀಡುವ ಬಗ್ಗೆ.

ಉಲ್ಲೇಖ:-
1. ಕಾರ್ಯನಿರ್ವಾಹಕ ನಿರ್ದೇಶಕರು ಇವರ PGCET-2017 –ದಾಖಲೆಗಳ ಪರಿಶೀಲನಾ ಅಧಿಸೂಚನೆ ಸಂಖ್ಯೆ: ಇಡಿ/ಕೆಇಎ/ಎಡಿಎಂಎನ್-26/2017-18, ದಿನಾಂಕ: 19-08-2017.
2. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಇವರ ನಿರಾಕ್ಷೇಪಣಾ ಪತ್ರ ಸಂಖ್ಯೆ: ಡಿಟಿಇ 03 ಸಿಡಿಸಿ (2) 2017-18.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1)ರ ಅಧಿಸೂಚನೆಯಲ್ಲಿ PGCET-2017 ಪರೀಕ್ಷೆಯಲ್ಲಿ ತೇರ್ಗಡೆಯಾದ ಉಪನ್ಯಾಸಕರುಗಳಿಗೆ ದಾಖಲೆಗಳ ಪರಿಶೀಲನೆ ಪ್ರಕ್ರಿಯೆ ಬಗ್ಗೆ ವೇಳಾ ಪಟ್ಟಿಯನ್ನು ಪ್ರಕಟಿಸಿರುವುದು ಸರಿಯಷ್ಟೆ. ಸಂಬಂಧಿಸಿದಂತೆ, ಉಲ್ಲೇಖ(2)ರನ್ವಯ ಈಗಾಗಲೇ 2017-18ನೇ ಸಾಲಿನಲ್ಲಿ ಪೂರ್ಣಕಾಲಿಕ/ಅರೆಕಾಲಿಕ ನೆಲೆಯಲ್ಲಿ ಎಂ.ಟೆಕ್/ಎಂ.ಇ ಉನ್ನತ ವ್ಯಾಸಂಗದ ಸಲುವಾಗಿ PGCET-2017ಗೆ ಅರ್ಜಿ ಸಲ್ಲಿಸಲು/ಪರೀಕ್ಷೆ ಬರೆಯಲು ನಿರಾಕ್ಷೇಪಾಣಾ ಪತ್ರವನ್ನು ಪಡೆದಿರುವ ಉಪನ್ಯಾಸಕರುಗಳಿಗೆ ಈ ಕೆಳಕಂಡ ನಿಯಮಗಳನ್ನು ಪೂರೈಸಿರುವ ಷರತ್ತಿಗೆ ಒಳಪಟ್ಟು ಹಾಗೂ ಈ ಹಿಂದೆ ಯಾವುದೇ ಪೂರ್ಣಕಾಲಿಕ/ಅರೆಕಾಲಿಕ ಉನ್ನತ ವ್ಯಾಸಂಗದ ನಿಯೋಜನೆ ಸೌಲಭ್ಯವನ್ನು ಪಡೆದಿರುವುದಿಲ್ಲವೆಂದು ಹಾಗೂ ವಿಭಾಗದಲ್ಲಿ ಸೂಕ್ತ ಸಿಬ್ಬಂದಿ ಕಾರ್ಯನಿರ್ವಹಿಸುತ್ತಿದ್ದು, ಸದರಿಯವರ ನಿಯೋಜನೆಯಿಂದ ಯಾವುದೇ ತೊಂದರೆಯಾಗುವುದಿಲ್ಲವೆಂದು ಸಂಬಂಧಪಟ್ಟ ಪ್ರಾಚಾರ್ಯರು ದೃಢೀಕರಿಸಿ ದಾಖಲೆಗಳ ಪರಿಶೀಲನೆ ಪ್ರಕ್ರಿಯೆಗೆ ಹಾಜರಾಗಲು ಅನುಮತಿ ನೀಡಬೇಕೆಂದು ಈ ಮೂಲಕ ಸೂಚಿಸಲಾಗಿದೆ.

ಆದಾಗ್ಯೂ ನಿಯಮ ಮತ್ತು ಷರತ್ತುಗಳನ್ನು ಉಲ್ಲಂಘಿಸಿ ದಾಖಲೆಗಳ ಪರಿಶೀಲನೆ ಪ್ರಕ್ರಿಯೆಗೆ ಹಾಜರಾಗಲು ಉಪನ್ಯಾಸಕರುಗಳಿಗೆ ಅನುಮತಿ ನೀಡಿದ್ದಲ್ಲಿ, ಮುಂದಿನ ಆಗುಹೋಗುಗಳಿಗೆ ಸಂಬಂಧಪಟ್ಟ ಪ್ರಾಚಾರ್ಯರನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.

ಕೆ.ಸಿ.ಎಸ್.ಅರ್. ನಿಯಮ 61(3) ಹಾಗೂ ಅಪೆಂಡಿಕ್ಸ್ 2ಎ ನಿಯಮ Iರ ಉಪನಿಯಮ (1) ರಿಂದ (10)ರನ್ವಯ ಮತ್ತು ಅಪೆಂಡಿಕ್ಸ್ 2ಎ ನಿಯಮ IIರ ಉಪನಿಯಮ (1) ರಿಂದ (5)ರನ್ವಯ ಪೂರ್ಣಕಾಲಿಕ ನೆಲೆಯಲ್ಲಿ M.E/M.Tech (FullTime) ಉನ್ನತ ವ್ಯಾಸಂಗಕ್ಕೆ ಆಯ್ಕೆಗೊಂಡ ಉಪನ್ಯಾಸಕರು ಐದು ವರ್ಷಗಳ ಸಕ್ರಮ ಸೇವೆಯನ್ನು ಹಾಗೂ ಅರೆಕಾಲಿಕ ನೆಲೆಯಲ್ಲಿ M.E/M.Tech (QIP/Part Time) ಉನ್ನತ ವ್ಯಾಸಂಗಕ್ಕೆ ಆಯ್ಕೆಗೊಂಡ ಉಪನ್ಯಾಸಕರು ಮೂರು ವರ್ಷಗಳ ಸಕ್ರಮ ಸೇವೆಯನ್ನು ಹಾಗೂ ಖಾಯಂ ಪೂರ್ವಾವಧಿಯನ್ನು ತೃಪ್ತಿಕರವಾಗಿ ಪೂರೈಸಿರಬೇಕು ಮತ್ತು ವಯೋಮಿತಿ 48 ವರ್ಷದ ಒಳಗಿರಬೇಕು.

ಜಂಟಿ ನಿರ್ದೇಶಕರು(ಸಿಡಿಸಿ)

**ಇವರಿಗೆ:**

1. ಎಲ್ಲಾ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
2. ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, 2ನೇ ಮಹಡಿ, ಬೆಂಗಳೂರು ಇವರಿಗೆ ಡಿಟಿಇ ವೆಬ್ ಸೈಟ್ ನಲ್ಲಿ ಪ್ರಕಟಿಸಲು ಮುಂದಿನ ಕ್ರಮಕ್ಕಾಗಿ.